129/17/ARC-7 Annexure - R2 8 6

A ... - 10192/14

## ಕರ್ನಾಟಕ ಲೋಕಾಯುಕ್ತ

ನಂ.ಕಂಪ್ಲೆಂಟ್/ಉಪಲೋಕ್/ಬಿಜಿಎಂ–1078/2014/ಪಿಪಿ

ಬಹುಮಹಡಿಗಳ ಕಟ್ಟಡ,
ಡಾ:ಅಂಬೇಡ್ಕರ್ ವೀಧಿ,
ಬೆಂಗಳೂರು.
ದಿನಾಂಕ : 26/12/2016

## ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 12(3) ರನ್ವಯ ವರದಿ

ವಿಷಯ: (1) ಶ್ರೀ ಜಿಡ್ಡಿ ಬಾಗಲು.ಎಸ್.ಎಸ್, ಹಿಂದಿನ ಕಾರ್ಯದರ್ಶಿ, ಚಿಕ್ಕರೂಗಿ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಾಪುರ ಜಿಲ್ಲೆ ಮತ್ತು (2) ಶ್ರೀಮತಿ ರೇಣುಕಾ ಗೋಪಾಲ್ ಜಡಿಪೇಟ, ಹಿಂದಿನ ಅಧ್ಯಕ್ಷರು, ಚಿಕ್ಕರೂಗಿ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಾಪುರ ಜಿಲ್ಲೆ ಇವರುಗಳು ಸರ್ಕಾರಿ/ಸಾರ್ವಜನಿಕ ನೌಕರರಾಗಿ ದುರ್ನಡತೆ ಎಸಗಿರುವ ಕುರಿತು ವರದಿ

*–*–*

ಪ್ರಕರಣದ ದೂರುದಾರರಾದ ಶ್ರೀ ಭೀಮಗೊಂಡ ಸಂಗಪ್ಪ ಕಬಾಡಗಿ ಇವರು ಈ ಸಂಸ್ಥೆಗೆ ದೂರೊಂದನ್ನು ಸಲ್ಲಿಸಿ, ವಿಜಾಪುರ ಜಿಲ್ಲೆಯ, ಸಿಂಧಗಿ ತಾಲ್ಲೂಕಿನ ಚಿಕ್ಕರೂಗಿ ಗ್ರಾಮ ಪಂಚಾಯತಿ ವತಿಯಿಂದ 2007 ರಿಂದ 2010 ರವರೆಗೆ ನಡೆದ ಕಾಮಗಾರಿಗಳಲ್ಲಿ ಕಡ್ಲೆವಾಡದ ಕೆ.ಇ.ಬಿ ಯಿಂದ ಅಂಕಲಗಿವರೆಗಿನ ರಸ್ತೆ ಹಾಗೂ ಚಿಕ್ರೂರ್ಗಿ ಗ್ರಾಮದಲ್ಲಿ ನಿರ್ಮಿಸಲಾಗಿರುವ ಸಿಮೆಂಟ್ ಕಾಂಕ್ರೀಟ್ ರಸ್ತೆಗಳು ಕಳಪೆ ಕಾಮಗಾರಿಯಿಂದ ಹಾಳಾಗಿರುತ್ತದೆ. ರಸ್ತೆಗಳಲ್ಲಿ ಹಳ್ಳಕೊಳ್ಳಗಳು ಬಿದ್ದಿರುತ್ತದೆ. ಇದಲ್ಲದೇ, ವಸತಿ ಯೋಜನೆಯಡಿಯಲ್ಲಿ ಅನರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ ಮನೆಗಳನ್ನು ಮಂಜೂರು ಮಾಡಲಾಗಿರುತ್ತದೆ. ಆದ್ದರಿಂದ, ಎದುರುದಾರರ ವಿರುದ್ಧ ಕ್ರಮ ಜರುಗಿಸಬೇಕೆಂದು ಕೋರಿದ್ದು, ಸದರಿ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 9 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ತನಿಖೆಗೆ ಆದೇಶಿಸಲಾಗಿರುತ್ತದೆ.

2. ಸದರಿ ದೂರಿನ ಆಧಾರದ ಮೇಲೆ ಎದುರುದಾರರ ಆಕ್ಷೇಪಣೆಯನ್ನು ಕರೆಯಲಾಗಿರುತ್ತದೆ. 1ನೇ ಎದುರುದಾರರು ತಮ್ಮ ಆಕ್ಷೇಪಣೆಯನ್ನು ಸಲ್ಲಿಸಿರುವುದಿಲ್ಲ. ಆದರೆ, ಅವರಿಗೆ ರವಾನಿಸಲಾಗಿದ್ದ ಪತ್ರದ ಸ್ವೀಕೃತಿಯನ್ನು ಕಛೇರಿಯಲ್ಲಿ ಸ್ವೀಕರಿಸಲಾಗಿರುತ್ತದೆ. ಆದ್ದರಿಂದ, ಸದರಿಯವರ ಆಕ್ಷೇಪಣೆ ದೂರಿಗೆ ಸಂಬಂಧಿಸಿದಂತೆ ಏನು ಇಲ್ಲವೆಂದು ಪರಿಗಣಿಸಲಾಗಿದೆ. 2ನೇ ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸಿ, ಅದರಲ್ಲಿ ತಾನು ದಿನಾಂಕ 29/03/2010 ಕ್ಕೆ ತನ್ನ ಅಧ್ಯಕ್ಷ ಸ್ಥಾನದ ಅವಧಿಯು ಮುಕ್ತಾಯಗೊಂಡಿರುತ್ತದೆ. ತದನಂತರ, ತನ್ನ ಅವಧಿಯಲ್ಲಿ ಚಿಕ್ಕರೂಗಿ ಗ್ರಾಮ ಪಂಚಾಯತ್ತಿಯ ವತಿಯಿಂದ ಕಡು ಬಡವರಿಗೆ, ಸ್ವಂತ ಮನೆ ಇಲ್ಲದವರೆಗೆ, ಖಾಲಿ ಜಾಗ ಇದ್ದವರಿಗೆ, ಗುಡಿಸಲು ವಾಸಿಗಳಿಗೆ ಮನೆ ನಿರ್ಮಿಸಲು ಅವರುಗಳನ್ನು ಫಲಾನುಭವಿಗಳೆಂದು ಗ್ರಾಮ ಪಂಚಾಯತಿ ಸಭೆಯಲ್ಲಿ ಆರಿಸಲಾಗಿದೆ. ದೂರುದಾರರು ತಿಳಿಸಿರುವಂತೆ ಅನರ್ಹ ಫಲಾನುಭವಿಗಳನ್ನು ಗ್ರಾಮ ಪಂಚಾಯತಿ ವತಿಯಿಂದ ವಸತಿ ಯೋಜನೆಯಡಿಯಲ್ಲಿ ಆಯ್ಕೆ ಮಾಡಿರುವುದಿಲ್ಲವೆಂದು ತಿಳಿಸಿರುತ್ತಾರೆ.

N. Ananda

ಬಗ್ಗೆ 2ನೇ ಎದುರುದಾರರು ಯಾವುದೇ ದಾಖಲೆಯನ್ನು ಹಾಜರುಪಡಿಸಿರುವುದಿಲ್ಲ ಹಾಗೂ ತಮ್ಮ ನಿಲುವನ್ನು ಸ್ಪಷ್ಟ ಪಡಿಸಲು ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳ ದಾಖಲೆಗಳನ್ನು ಹಾಗೂ ಫಲಾನುಭವಿಗಳಿಗೆ ಸಂಬಂಧಿಸಿದ ಅರ್ಜಿಗಳನ್ನು ಹಾಗೂ ಸಂಬಂಧಪಟ್ಟ ಬಿಲ್ಲುಗಳನ್ನು, ಇದಲ್ಲದೇ, ಕಟ್ಟಿರುವ ಮನೆಗಳ ಫೋಟೋಗಳನ್ನು ಹಾಜರುಪಡಿಸಿರುವುದಿಲ್ಲ. 1ನೇ ಎದುರುದಾರರು ತಮ್ಮ ಆಕ್ಷೇಪಣೆಯನ್ನೇ ಸಲ್ಲಿಸಿರುವುದಿಲ್ಲ. ಈ ಹಿನ್ನೆಲೆಯಲ್ಲಿ, ದೂರಿನಂಶಗಳು ಮೇಲ್ನೋಟಕ್ಕೆ ಸಾಬೀತಾಗಿರುತ್ತದೆ ಎಂದು ಕಂಡು ಬರುತ್ತದೆ.

6. ಮೇಲೆ ಚರ್ಚಿಸಿದ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮಗಳು 1966ರ ನಿಯಮ 3(1)(ii) ಮತ್ತು (iii) ರನ್ವಯ ಎದುರುದಾರರುಗಳು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡುಬಂದಿದ್ದರಿಂದ, **ಎದುರುದಾರರಾದ (1) ಶ್ರೀ ಜಿಡ್ಡಿ ಬಾಗಲು.ಎಸ್.ಎಸ್, ಹಿಂದಿನ ಕಾರ್ಯದರ್ಶಿ, ಚಿಕ್ಕರೂಗಿ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಾಪುರ ಜಿಲ್ಲೆ** ಇವರ ವಿರುದ್ಧ ಶಿಸ್ತು ನಡವಳಿಕೆ ಕ್ರಮ ಜರುಗಿಸಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ, ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿದೆ.

7. ಹಾಗೂ 2ನೇ ಎದುರುದಾರರಾದ **ಶ್ರೀಮತಿ ರೇಣುಕಾ ಗೋಪಾಲ್ ಜಡಿಪೇಟ, ಹಿಂದಿನ ಅಧ್ಯಕ್ಷರು, ಚಿಕ್ಕರೂಗಿ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಾಪುರ ಜಿಲ್ಲೆ** ಇವರು ಸಾರ್ವಜನಿಕ ನೌಕರರು/ಚುನಾಯಿತ ಪ್ರತಿನಿಧಿಗಳಾಗಿರುವುದರಿಂದ, ಇವರ ವಿರುದ್ಧ ಕರ್ನಾಟಕ ಪಂಚಾಯತ್‌ರಾಜ್ ಕಾಯ್ದೆಯಡಿ ಕ್ರಮವನ್ನು ಜರುಗಿಸಲು ಶಿಫಾರಸ್ಸು ಮಾಡಿದೆ.

8. ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(4) ರ ಪ್ರಕಾರ, ಶಿಸ್ತು ಪ್ರಾಧಿಕಾರವು ವರದಿಯನುಸಾರ ಕೈಗೊಂಡ ಕ್ರಮದ ಬಗ್ಗೆ ಅಥವಾ ಕೈಗೊಳ್ಳಬಹುದಾದ ಕ್ರಮದ ಬಗ್ಗೆ, ಈ ವರದಿ ತಲುಪಿದ ದಿನಾಂಕದಿಂದ ಮೂರು ತಿಂಗಳೊಳಗಾಗಿ ಈ ಪ್ರಾಧಿಕಾರಕ್ಕೆ ವರದಿ ಮಾಡಲು ಸೂಚಿಸಲಾಗಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

N. Anand 26/12

(ನ್ಯಾಯಮೂರ್ತಿ ಎನ್.ಆನಂದ)
ಉಪಲೋಕಾಯುಕ್ತರು,
ಕರ್ನಾಟಕ ರಾಜ್ಯ,
ಬೆಂಗಳೂರು. 26/12/16